# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2009-10ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮಕ್ಕೆ ಒದಗಿಸಿರುವ ಅನುದಾನಕ್ಕೆ ಕ್ರಿಯಾ ಯೋಜನೆ, ಮಾರ್ಗಸೂಚಿಗಳು, ಕರ್ತವ್ಯಗಳು ಹಾಗೂ ಜವಾಬ್ದಾರಿಗಳು.

ಓದಲಾಗಿದೆ: ಪತ್ರ ಸಂಖ್ಯೆ: ಕಕುಉಅನಿನಿ/ತಾಅ-3/ವಿಘಯೋ/2009-10/1578, ದಿನಾಂಕ 09.12.2009.

---*---

ಪ್ರಸ್ತಾವನೆ :

2009-10ನೇ ಸಾಲಿನಲ್ಲಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅನುದಾನವನ್ನು ನಿಗದಿಪಡಿಸಲಾಗಿದೆ. ಈ ಸಂಬಂಧ ಕ್ರಿಯಾ ಯೋಜನೆಯನ್ನು ಸಲ್ಲಿಸುತ್ತಾ ತತ್ಸಂಬಂಧಿತ ಕ್ರಿಯಾ ಯೋಜನೆ, ಮಾರ್ಗಸೂಚಿಗಳು ಹಾಗೂ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಅಧಿಕಾರಿಗಳು ನಿರ್ವಹಿಸಬೇಕಾದ ಕರ್ತವ್ಯಗಳು ಹಾಗೂ ಜವಾಬ್ದಾರಿಗಳಿಗೆ ಅನುಮೋದನೆ ನೀಡುವಂತೆ ಮೇಲೆ ಓದಲಾದ ದಿನಾಂಕ 09.12.2009ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ರವರು ಕೋರಿದ್ದಾರೆ.

## ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 15 ಕಕುಮ 2009, ಬೆಂಗಳೂರು, ದಿನಾಂಕ 15.01.2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರ 2009-10ನೇ ಸಾಲಿನಲ್ಲಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಈ ಸಂಬಂಧ ಇದರೊಂದಿಗೆ ಲಗತ್ತಿಸಿರುವ ಅನುಬಂಧ-1ರಲ್ಲಿ ನಿಗದಿಪಡಿಸಿರುವ ಮಾರ್ಗಸೂಚಿಗಳನ್ನು ಹಾಗೂ

...2)

ಅನುಬಂಧ–2ರಲ್ಲಿ ನಿಗದಿಪಡಿಸಿರುವ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಅಧಿಕಾರಿಗಳು ನಿರ್ವಹಿಸಬೇಕಾದ ಕರ್ತವ್ಯ ಹಾಗೂ ಜವಾಬ್ದಾರಿಗಳನ್ನು ತಪ್ಪದೆ ಕಟ್ಟುನಿಟ್ಟಾಗಿ ಪಾಲಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಕೆ.ಶ್ರೀನಿವಾಸಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
[ಪಶುಸಂಗೋಪನೆ]

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ–4), ಬೆಂಗಳೂರು.
3. ಆಯುಕ್ತರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಯೋಜನೆ ಮತ್ತು ಸಾಂಖ್ಯಿಕ ಇಲಾಖೆ (ಪರಿಯೋಜನಾ ರಚನಾ ವಿಭಾಗ), ಬೆಂಗಳೂರು.
5. ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
7. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
9. ಖಜಾನಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
10. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.

# ಅನುಬಂಧ-1

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಅನುಷ್ಠಾನಗೊಳ್ಳುವ ವಿಶೇಷ ಘಟಕ ಯೋಜನ ಮತ್ತು ಗಿರಿಜನ ಉಪಯೋಜನೆ ಕುರಿತ ಮಾರ್ಗಸೂಚಿಗಳು:-

1) ಈ ಯೋಜನೆಗಳಡಿ ಕುರಿ : ಮೇಕೆ ಘಟಕಗಳನ್ನು ನಿಗಮದಲ್ಲಿ ನೋಂದಣಿಯಾಗಿರುವ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡಗಳ ಮಹಿಳಾ ಸದಸ್ಯರುಗಳಿಗೆ ನೀಡುವುದು.

2) ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿಯ ಮಹಿಳಾ ಸದಸ್ಯರುಗಳಿಗೆ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಪಂಗಡದ ಮಹಿಳಾ ಸದಸ್ಯರುಗಳಿಗೆ ಕುರಿ : ಮೇಕೆ ಘಟಕಗಳನ್ನು ಒದಗಿಸುವುದು.

3) ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳಲ್ಲಿ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಮಹಿಳಾ ಸದಸ್ಯರುಗಳು ಲಭ್ಯವಿಲ್ಲದಿದ್ದ ಸಂದರ್ಭಗಳಲ್ಲಿ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಪುರುಷ ಸದಸ್ಯರನ್ನು ಫಲಾನುಭವಿಗಳನ್ನಾಗಿ ಪರಿಗಣಿಸಲಾಗುವುದು.

4) ಈ ಯೋಜನೆಗಳಡಿ ಒದಗಿಸಲಾಗುವ ಒಂದು 10+1ರ ಕುರಿ ಘಟಕದ ವೆಚ್ಚ ರೂ.23,600.00 ಆಗಿರುತ್ತದೆ ಹಾಗೂ ಒಂದು 10+1ರ ಮೇಕೆ ಘಟಕದ ವೆಚ್ಚ ರೂ.23,100.00 ಆಗಿರುತ್ತದೆ.

5) ವಿಶೇಷ ಘಟಕ ಯೋಜನೆಯಡಿ ಸವಲತ್ತು ಪಡೆಯುವ ಫಲಾನುಭವಿಗಳಿಗೆ ಕುರಿ ಘಟಕ ಒಂದಕ್ಕೆ ಘಟಕ ವೆಚ್ಚದ ಶೇಕಡ 50 ರಂತೆ ಅಥವಾ ಗರಿಷ್ಠ ರೂ.10,000/- ಹಾಗೂ ಮೇಕೆ ಘಟಕ ಒಂದಕ್ಕೆ ಘಟಕ ವೆಚ್ಚದ ಶೇಕಡ 50 ರಂತೆ ಅಥವಾ ಗರಿಷ್ಠ ರೂ.10,000/-ಗಳ ಸಹಾಯಧನವನ್ನು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮವು ನೀಡಲಿದ್ದು, ಕ್ರಮವಾಗಿ ಉಳಿಕೆ ಮೊತ್ತ ರೂ.13,600.00 ಹಾಗೂ ರೂ.13,100.00 ಗಳನ್ನು ಸ್ಥಳೀಯ ರಾಷ್ಟ್ರೀಕೃತ/ಗ್ರಾಮೀಣ/ಸಹಕಾರಿ ಬ್ಯಾಂಕ್‌ಗಳು ಸಾಲದ ರೂಪದಲ್ಲಿ ಒದಗಿಸುವುವು.

6) ಗಿರಿಜನ ಉಪಯೋಜನೆಗಳಡಿ ಸವಲತ್ತು ಪಡೆಯುವ ಫಲಾನುಭವಿಗಳಿಗೆ ಕುರಿ ಘಟಕ ಒಂದಕ್ಕೆ ಘಟಕ ವೆಚ್ಚದ ಶೇಕಡ 50 ರಂತೆ ಅಥವಾ ಗರಿಷ್ಠ ರೂ.10,000/- ಹಾಗೂ ಮೇಕೆ ಘಟಕ ಒಂದಕ್ಕೆ ಘಟಕ ವೆಚ್ಚದ ಶೇಕಡ 50 ರಂತೆ ಅಥವಾ ಗರಿಷ್ಠ ರೂ.10,000/-ಗಳ ಸಹಾಯಧನವನ್ನು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವ್ರುದ್ಧಿ ನಿಗಮವು ನೀಡಲಿದ್ದು, ಕ್ರಮವಾಗಿ ಉಳಿಕೆ ಮೊತ್ತ ರೂ.13,600.00 ಹಾಗೂ ರೂ.13,100.00 ಗಳನ್ನು ಸ್ಥಳೀಯ ರಾಷ್ಟ್ರೀಕೃತ/ಗ್ರಾಮೀಣ/ಸಹಕಾರಿ ಬ್ಯಾಂಕ್‌ಗಳು ಸಾಲದ ರೂಪದಲ್ಲಿ ಒದಗಿಸುವುವು.

7) ಈ ಯೋಜನೆಗಳಡಿ ಆಯ್ಕೆಯಾಗುವ ಪ್ರತಿಯೊಂದು ಫಲಾನುಭವಿಗೆ ಒಂದು (10+1) ರ ಕುರಿ : ಮೇಕೆ ಘಟಕಗಳನ್ನು ನೀಡುವುದು.

8) ಈ ಯೋಜನೆಗಳಡಿ ಅರ್ಹ ಪರಿಶಿಷ್ಟ ಜಾತಿಯ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳನ್ನು ಈ ಕೆಳಕಂಡ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯು ಆಯ್ಕೆ ಮಾಡುವುದು.

...2)

ಆಯ್ಕೆ ಸಮಿತಿಯ ಸದಸ್ಯರ ವಿವರಗಳು:-

| | | |
|---|---|---|
| 1) | ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಪಂಚಾಯತ್ ಅಧ್ಯಕ್ಷರು : ಪ್ರತಿನಿಧಿ | ಅಧ್ಯಕ್ಷರು |
| 2) | ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಪಂಚಾಯತ್ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರು : ಪ್ರತಿನಿಧಿ | ಸದಸ್ಯರು |
| 3) | ಸಂಬಂಧಿಸಿದ ಜಿಲ್ಲೆಯ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪ ನಿರ್ದೇಶಕರು | ಸದಸ್ಯರು |
| 4) | ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ | ಸದಸ್ಯರು |
| 5) | ಸಂಬಂಧಿಸಿದ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು | ಸದಸ್ಯರು |
| 6) | ಸಂಬಂಧಿಸಿದ ಜಿಲ್ಲೆಯ ಮಾರ್ಗದರ್ಶಿ (ಲೀಡ್) ಬ್ಯಾಂಕ್‌ನ ವ್ಯವಸ್ಥಾಪಕರು ಅಥವಾ ಪ್ರತಿನಿಧಿ | ಸದಸ್ಯರು |
| 7) | ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದಿಂದ ನಿಯೋಜಿಸಲ್ಪಡುವ ಜಿಲ್ಲಾ ಉಸ್ತುವಾರಿ ಅಧಿಕಾರಿ | ಸದಸ್ಯ ಕಾರ್ಯದರ್ಶಿ |

9) ಈ ಯೋಜನೆಯ ಲಾಭ ಪಡೆಯುವ ಫಲಾನುಭವಿಗಳು ಸಾಲ ಮಂಜೂರಾದ ದಿನಾಂಕದಿಂದ ಎರಡು ವರ್ಷದ ನಂತರ ಅಥವಾ ಈ ಘಟಕದಿಂದ ಪ್ರಥಮ ಫಸಲನ್ನು ಪಡೆದ ದಿನಾಂಕ ಇವುಗಳಲ್ಲಿ ಮೊದಲು ಯಾವುದೋ, ಆ ದಿನದಿಂದ ಬ್ಯಾಂಕ್‌ಗಳಿಂದ ಪಡೆಯಲಾದ ಸಾಲವನ್ನು ಸಮನಾದ 8 ಅರ್ಧ ವಾರ್ಷಿಕ ಕಂತುಗಳಲ್ಲಿ ಬ್ಯಾಂಕ್‌ಗಳು ನಿಗದಿಪಡಿಸುವ ಬಡ್ಡಿ ದರವನ್ನು ಸೇರಿಸಿ ಮರುಪಾವತಿಸುವುದು.

10) ಈ ಯೋಜನೆಯಡಿ ಒದಗಿಸಲಾಗುವ ಕುರಿ : ಮೇಕೆ ಘಟಕಗಳನ್ನು ಕಡ್ಡಾಯವಾಗಿ ವಿಮೆಗೊಳಪಡಿಸುವುದು.

11) ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಸ್ಥಳೀಯ ಪಶುವೈದ್ಯರುಗಳು ಈ ಘಟಕಗಳಲ್ಲಿನ ಕುರಿಗಳ : ಮೇಕೆಗಳ ಆರೋಗ್ಯ ರಕ್ಷಣೆಯ ಜವಾಬ್ದಾರಿಯನ್ನು ಹೊಂದಿರುತ್ತಾರೆ.

12) ಈ ಯೋಜನೆಯಡಿ ನೀಡಲಾಗುವ ಕುರಿ : ಮೇಕೆ ಘಟಕಗಳಿಗೆ ಆರೋಗ್ಯ ದೃಢೀಕರಣ ಪತ್ರವನ್ನು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಸ್ಥಳೀಯ ಪಶುವೈದ್ಯರುಗಳು ಅಥವಾ ನಿಗಮದ ಅನುಷ್ಠಾನಾಧಿಕಾರಿಗಳು ನೀಡಬೇಕು.

13) ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಉಸ್ತುವಾರಿ ಅಧಿಕಾರಿಗಳು ಹಾಗೂ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ವಿವಿಧ ಹಂತದ ಅಧಿಕಾರಿಗಳು ಸರ್ಕಾರವು ಪ್ರತ್ಯೇಕವಾಗಿ ವಿಶೇಷ ಘಟಕ ಯೋಜನೆ / ಗಿರಿಜನ ಉಪಯೋಜನೆ ಸಂಬಂಧ ಹೊರಡಿಸಿರುವ ಕರ್ತವ್ಯಗಳು ಹಾಗೂ ಜವಾಬ್ದಾರಿಗಳಿಗನುಗುಣವಾಗಿ ಕಾರ್ಯ ನಿರ್ವಹಿಸುವುದು.

ಅನುಬಂಧ-2

ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಲ್ಲಿ ವಿವಿಧ ಹಂತಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಅಧಿಕಾರಿಗಳು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಮುಖೇನ ಅನುಷ್ಠಾನಗೊಳ್ಳುವ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ನಿರ್ವಹಿಸಬೇಕಾದ ಕರ್ತವ್ಯಗಳು ಹಾಗೂ ಜವಾಬ್ದಾರಿಗಳು:-

1. ಆಯುಕ್ತರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು:-

1.1 ರಾಜ್ಯ ಮಟ್ಟದಲ್ಲಿ ಪಶು .ಸಂಗೋಪನಾ ಇಲಾಖೆಯ ಆಯುಕ್ತರು ಈ ಕಾರ್ಯಕ್ರಮದ ಅನುಷ್ಠಾನ ಕುರಿತು ಪುನರಾವಲೋಕನ ಹಾಗೂ ಅನುಷ್ಠಾನಾಧಿಕಾರಿಗಳ ಮೇಲ್ವಿಚಾರಕರಾಗಿ ಕಾರ್ಯನಿರ್ವಹಿಸುವುದು.

1.2 ಈ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆಯೊಂದಿಗೆ ಇಲಾಖೆಯ ಅನುಷ್ಠಾನಾಧಿಕಾರಿಗಳಿಗೆ ಆಗಿಂದಾಗ್ಗೆ ನಿರ್ದೇಶನ ಹಾಗೂ ಮಾರ್ಗಸೂಚಿಗಳನ್ನು ಹೊರಡಿಸುವರು.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ, ಬೆಂಗಳೂರು:-

2.1 ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಜಿಲ್ಲಾವಾರು ಗುರಿಗಳನ್ನು ನಿಗದಿಪಡಿಸಿ ಮರುಹಂಚಿಕೆ ನೀಡುವುದರೊಂದಿಗೆ ಮಾಹಿತಿಯನ್ನು ಆಯುಕ್ತರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆರವರಿಗೆ ಸಲ್ಲಿಸುವುದು.

2.2 ಮಾಸಿಕ ಬಹುಹಂತದ ಪರಿಶೀಲನೆಯ ಗುರಿಗಳಿಗನುಗುಣವಾಗಿ ಹಾಗೂ ಪ್ರಗತಿಗನುಗುಣವಾಗಿ ಸಂಭವನೀಯ ವೆಚ್ಚ ಭರಿಸಲು ಕುರಿ ಘಟಕಗಳ ಸಹಾಯಧನವನ್ನು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಉಸ್ತುವಾರಿ ಅಧಿಕಾರಿಗಳು ಸಲ್ಲಿಸುವ ಪ್ರಸ್ತಾವನೆಗಳಿಗನುಗುಣವಾಗಿ ಬಿಡುಗಡೆಗೊಳಿಸುವುದು.

2.3 ಜಿಲ್ಲಾ ಮಟ್ಟದ ಕ್ರೋಢೀಕೃತ ಪ್ರಗತಿ ವರದಿಗಳನ್ನು ಜಿಲ್ಲೆಯ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕರವರಿಂದ ಅಥವಾ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಉಸ್ತುವಾರಿ ಅಧಿಕಾರಿಗಳಿಂದ ಪಡೆದು ಕ್ರೋಢೀಕರಿಸಿ, ಕ್ರೋಢೀಕೃತ ವರದಿಗಳನ್ನು ಆಯುಕ್ತರು, ಪಶುಪಾಲನಾ ಇಲಾಖೆರವರ ಪುನರಾವಲೋಕನಕ್ಕಾಗಿ ಸಲ್ಲಿಸುವುದು.

2.4 ಕಾರ್ಯಕ್ರಮದ ಅನುಷ್ಠಾನದ ಹಂತದಲ್ಲಿ ಸದ್ವಿನಿಯೋಗ ಪ್ರಮಾಣ ಪತ್ರವನ್ನು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಉಸ್ತುವಾರಿ ಅಧಿಕಾರಿಗಳಿಂದ ವ್ಯವಸ್ಥಾಪಕ ನಿರ್ದೇಶಕರೇ ಪಡೆದುಕೊಂಡು, ಈ ಕುರಿತು ಲೆಕ್ಕ ಪತ್ರಗಳ ನಿರ್ವಹಣೆ ಹಾಗೂ ಮೇಲುಸ್ತುವಾರಿ ನೋಡಿಕೊಳ್ಳುವುದು.

2.5 ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಗಳಡಿಯ ಫಲಾನುಭವಿಗಳ ಯಾದಿ ಹಾಗೂ ವಹಿಗಳನ್ನು ರಾಜ್ಯಮಟ್ಟದಲ್ಲಿ ವ್ಯವಸ್ಥಾಪಕ ನಿರ್ದೇಶಕರು ನಿರ್ವಹಿಸುವುದು.

...2)

3. <u>ಉಪ ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ</u>:-

3.1 ಮಾರ್ಯಯಾನ ನಿರ್ಧಿಷ್ಟಪಡಿಸಿದ ಗುರಿಗಳಿಗನುಗುಣವಾಗಿ ಫಲಾನುಭವಿಗಳ ಆಯ್ಕೆಗಾಗಿ ಮಾರ್ಗಸೂಚಿಗಳನ್ವಯ ಕ್ರಮವಿಡುವುದು.

3.2 ಈ ಯೋಜನೆಗಳಡಿ ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಯೋಜನೆಯ ಅನುಷ್ಠಾನಕ್ಕಾಗಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಉಸ್ತುವಾರಿ ಅಧಿಕಾರಿಗಳಿಗೆ ರವಾನಿಸುವುದು.

3.3 ಈ ಯೋಜನೆಯ ವ್ಯಾಪಕ ಪ್ರಚಾರಕ್ಕಾಗಿ ಕ್ರಮ ಕೈಗೊಳ್ಳುವುದು.

3.4 ಈ ಯೋಜನೆಗಳ ಪ್ರಗತಿ ಕುರಿತು ಜಿಲ್ಲಾಮಟ್ಟದ ಕ್ರೋಢೀಕೃತ ವರದಿಗಳನ್ನು ನಿಗಧಿತ ನಮೂನೆಯಲ್ಲಿ ಪ್ರತಿ ತಿಂಗಳೂ 5ನೇ ತಾರೀಕಿನ ಒಳಗಾಗಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮಕ್ಕೆ ಸಲ್ಲಿಸುವುದು.

4. <u>ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಉಸ್ತುವಾರಿ ಅಧಿಕಾರಿಗಳು</u>:-

4.1 ಜಿಲ್ಲಾಮಟ್ಟದ ಆಯ್ಕೆ ಸಮಿತಿಯು ಆಯ್ಕೆ ಮಾಡುವ ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪ ನಿರ್ದೇಶಕರವರಿಂದ ಪಡೆದು ಕಾರ್ಯವ್ಯಾಪ್ತಿಯಲ್ಲಿನ ಫಲಾನುಭವಿಗಳಿಂದ ನಿಗಧಿತ ನಮೂನೆಗಳಲ್ಲಿ ಅರ್ಜಿಗಳನ್ನು ಸೂಕ್ತ ದಾಖಲೆಗಳೊಂದಿಗೆ ಸ್ವೀಕರಿಸುವುದು.

4.2 ಫಲಾನುಭವಿಗಳು ಸಲ್ಲಿಸುವ ಅರ್ಜಿಗಳನ್ನು ಸಾಲ ಮಂಜೂರಾತಿಗಾಗಿ ಸ್ಥಳೀಯ ನಿಗಧಿತ ಬ್ಯಾಂಕ್‌ಗಳಿಗೆ ಕಳುಹಿಸಿ ಸಂಬಂಧಪಟ್ಟ ಬ್ಯಾಂಕ್‌ಗಳಿಂದ ಸಾಲ ಮಂಜೂರಾತಿ ದೃಢೀಕರಣ ಪತ್ರ ಪಡೆಯುವುದು.

4.3 ಸಂಬಂಧಪಟ್ಟ ಬ್ಯಾಂಕ್‌ಗಳಿಂದ ಸಾಲ ಮಂಜೂರಾತಿ ದೃಢೀಕರಣ ಪತ್ರ ಪಡೆದ ನಂತರ ಫಲಾನುಭವಿಗಳ ಅರ್ಜಿಗಳನ್ನು ಸೂಕ್ತ ದಾಖಲೆಗಳೊಂದಿಗೆ ಹಾಗೂ ಬ್ಯಾಂಕ್‌ಗಳು ನೀಡುವ ಸಾಲ ಮಂಜೂರಾತಿ ದೃಢೀಕರಣ ಪತ್ರದೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರಿಗೆ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಪಾಲಿನ ಸಹಾಯಧನ ಮಂಜೂರಾತಿಗಾಗಿ ಸಲ್ಲಿಸುವುದು.

4.4 ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಸಹಾಯಧನ ಮಂಜೂರಾದ ನಂತರ ಪ್ರಸ್ತಾವನೆಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರಿಂದ ಪಡೆದು ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳುವುದು.

4.5 ಈ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಫಲಾನುಭವಿಗಳ ಯಾದಿ ಹಾಗೂ ವಹಿಯನ್ನು ನಿರ್ವಹಿಸುವುದು.

...3)

ಯೋಜನೆಗಳ ಅನುಷ್ಠಾನದ ನಂತರ ಸಹಾಯಧನದ ಬಳಕೆ ಕುರಿತು ಸದ್ವಿನಿಯೋಗ ಪ್ರಮಾಣ ಪತ್ರವನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರಿಗೆ ಸಲ್ಲಿಸುವುದು.

4.7 ಪ್ರತಿ ಮಾಹೆಯಲ್ಲಿ ಈ ಯೋಜನೆಗಳ ಪ್ರಗತಿಯ ವಿವರಗಳನ್ನು ನಿಗಧಿತ ನಮೂನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ. ಬೆಂಗಳೂರು ಇವರಿಗೆ ಪ್ರತಿ ಮಾಹೆಯ 5ನೇ ದಿನಾಂಕದೊಳಗೆ ಸಲ್ಲಿಸುವುದು.

4.8 ಈ ಯೋಜನೆಯಡಿಯ ಫಲಾನುಭವಿಗಳ ಪಟ್ಟಿ ಹಾಗೂ ಒದಗಿಸಲಾದ ಕುರಿ : ಮೇಕೆ ಘಟಕಗಳ ವಿವರಗಳ ಮಾಹಿತಿಯನ್ನು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಸ್ಥಳೀಯ ಸಹಾಯಕ ನಿರ್ದೇಶಕರು : ಪಶುವೈದ್ಯಾಧಿಕಾರಿಗಳಿಗೆ ನೀಡುವುದು.

5. <u>ಸಹಾಯಕ ನಿರ್ದೇಶಕರು : ಪಶುವೈದ್ಯಾಧಿಕಾರಿಗಳು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ</u>:-

5.1 ಈ ಯೋಜನೆಯ ವ್ಯಾಪಕ ಪ್ರಚಾರ ಕೈಗೊಳ್ಳುವುದು.

5.2 ಈ ಯೋಜನೆಯಡಿ ನೀಡಲಾಗುವ ಕುರಿ : ಮೇಕೆ ಘಟಕಗಳಿಗೆ ತಾಂತ್ರಿಕ ಮಾರ್ಗದರ್ಶನ ಹಾಗೂ ಕುರಿಗಳ : ಮೇಕೆಗಳ ಆರೋಗ್ಯ ರಕ್ಷಣೆಯ ಜವಾಬ್ದಾರಿ ಹೊರುವುದು.

5.3 ಈ ಯೋಜನೆಯಡಿ ಖರೀದಿಸಲಾಗುವ ಕುರಿ : ಮೇಕೆ ಘಟಕಗಳಿಗೆ ಆರೋಗ್ಯ ದೃಢೀಕರಣ ಪತ್ರ ನೀಡುವುದು.

6. <u>ಸಾಮಾನ್ಯ ತಪಾಸಣೆ</u>:-

ಸದರಿ ಯೋಜನೆಯಲ್ಲಿ ವ್ಯಯಗೊಂಡ ವೆಚ್ಚಗಳು ಕಂಪನಿ ಕಾಯ್ದೆಯ ನಿಯಮಗಳನ್ವಯ ನಿಯೋಜಿತವಾಗಿರುವ ಆಂತರಿಕ ಲೆಕ್ಕ ಪರಿಶೋಧಕರು ಶಾಸನಬದ್ಧ ಲೆಕ್ಕ ಪರಿಶೋಧಕರು ಮತ್ತು ಕಂಟ್ರೋಲರ್ ಮತ್ತು ಆಡಿಟರ್ ಜನರಲ್ ಆಫ್ ಇಂಡಿಯಾ ಇವರ ಲೆಕ್ಕ ಪರಿಶೋಧನೆ ವ್ಯಾಪ್ತಿಗೆ ಒಳಪಡುತ್ತದೆ.

(ಬಿ.ಕೆ.ಶ್ರೀನಿವಾಸಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
[ಪಶುಸಂಗೋಪನೆ]

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 27 ಕಕುಮ 2014**
**ಬೆಂಗಳೂರು, ದಿನಾಂಕ: 23.12.2014**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 15 ಕಕುಮ 2009 ದಿನಾಂಕ: 15.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಪಸಂಮೀ 5 ಕಕುಮ 2013 ದಿನಾಂಕ: 04.02.2013 ರನ್ವಯ ರಚಿಸಲಾದ ಜಿಲ್ಲಾಮಟ್ಟದ ಆಯ್ಕೆ ಸಮಿತಿಯನ್ನು ಈ ಕೆಳಕಂಡಂತೆ ಪುನರ್ ರಚಿಸಿ ಆದೇಶಿಸಿದೆ.

| ಕ್ರ..ಸಂ | ಅಧಿಕಾರಿಗಳ ವಿವರ | |
|---|---|---|
| 1 | ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್ | ಅಧ್ಯಕ್ಷರು |
| 2 | ಉಪ ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ | ಸದಸ್ಯರು |
| 3 | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 4 | ಜಿಲ್ಲಾ ಮಾರ್ಗದರ್ಶಿ ಬ್ಯಾಂಕಿನ ವ್ಯವಸ್ಥಾಪಕರು | ಸದಸ್ಯರು |
| 5 | ಉಪ ನಿಬಂಧಕರು, ಸಹಕಾರ ಇಲಾಖೆ | ಸದಸ್ಯರು |
| 6 | ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಉಸ್ತುವಾರಿ ಅಧಿಕಾರಿ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

23/12

(ಹೆಚ್. ಪ್ರಸನ್ನ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಪಶುಸಂಗೋಪನೆ)
23/12/14

2957

ಗೆ:

**ಸಂ:ಕಕುಉಅನಿನಿ:ಯೋಜನೆ:2014-15** /2097 **ದಿನಾಂಕ 5-1-2015.**

**ಪ್ರತಿಯನ್ನು ನಿಗಮದ ಎಲ್ಲಾ ಜಿಲ್ಲಾ ಅನುಷ್ಠಾನಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.**

**ವ್ಯವಸ್ಥಾಪಕ ನಿರ್ದೇಶಕರು.**

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿಶೇಷ ಘಟಕ ಯೋಜನೆ/ ಗಿರಿಜನ ಉಪಯೋಜನೆ ಹಾಗೂ ಸಹಾಯಾನುದಾನ ಯೋಜನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 15 ಕಕುಮ 2009 ದಿನಾಂಕ: 15.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಪಸಂಮೀ 05 ಕಕುಮ 2013 ದಿನಾಂಕ: 04.02.2013.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕಕುಉಅನಿನಿ/ಯೋಜನೆ/ವಿಘಯೋ/2014-15/1316 ದಿನಾಂಕ: 01.09.2014.

*****

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶಗಳಲ್ಲಿ 2009-10 ನೇ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಹಾಗೂ ಸಹಾಯಾನುದಾನ ಯೋಜನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯನ್ನು ರಚಿಸಲಾಗಿರುತ್ತದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಇವರು ಮೇಲೆ ಓದಲಾದ (2) ರ ಪತ್ರದಲ್ಲಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಹಾಗೂ ಸಹಾಯಾನುದಾನ ಯೋಜನೆಗಳ ಫಲಾನುಭವಿಗಳಿಗೆ ಕುರಿ ಘಟಕಗಳನ್ನು ಪೂರೈಸಲಾಗುತ್ತಿದ್ದು, ಯೋಜನೆಗಳನ್ನು ಸರ್ಕಾರದ ಆದೇಶಗಳಲ್ಲಿನ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸ್ತುತ ನಿಗಮದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯನ್ನು ಈ ಕೆಳಕಂಡಂತೆ ಪುನರ್ ರಚಿಸಿ ಆದೇಶ ಹೊರಡಿಸಿ ಮುಂದಿನ ನಿಗಮದ ಆಡಳಿತ ಮಂಡಳಿಯ ಅನುಮೋದನೆಯನ್ನು ನಿರೀಕ್ಷಿಸಿ, ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 15 ಕಕುಮ 2009 ದಿನಾಂಕ: 15.01.2010 ರ ಮಾರ್ಗಸೂಚಿ ಕ್ರಮ ಸಂಖ್ಯೆ: 8 ರನ್ವಯ ಹಾಗೂ ದಿನಾಂಕ: 4.02.2013 ರ ತಿದ್ದುಪಡಿ ಆದೇಶದನ್ವಯ ರಚಿಸಲಾಗಿರುವ ಆಯ್ಕೆ ಸಮಿತಿಯನ್ನು ಈ ಕೆಳಕಂಡಂತೆ ಪುನರ್ ರಚಿಸಲು ಕೋರಿರುತ್ತಾರೆ.

| ಕ್ರ, ಸಂ | ಅಧಿಕಾರಿಗಳ ವಿವರ | |
|---|---|---|
| 1 | ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್ | ಅಧ್ಯಕ್ಷರು |
| 2 | ಉಪ ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ | ಸದಸ್ಯರು |
| 3 | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 4 | ಜಿಲ್ಲಾ ಮಾರ್ಗದರ್ಶಿ ಬ್ಯಾಂಕಿನ ವ್ಯವಸ್ಥಾಪಕರು | ಸದಸ್ಯರು |
| 5 | ಉಪ ನಿಬಂಧಕರು, ಸಹಕಾರ ಇಲಾಖೆ | ಸದಸ್ಯರು |
| 6 | ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಉಸ್ತುವಾರಿ ಅಧಿಕಾರಿ | ಸದಸ್ಯ ಕಾರ್ಯದರ್ಶಿ |

..2

# ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ 9 ಕಕುಮ 2015

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 04.05.2015

## ಸೇರ್ಪಡೆ ಆದೇಶ

ವಿಷಯ: ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗೆ ಸಂಬಂಧಿಸಿದ ಮಾರ್ಗಸೂಚಿಗೆ ತಿದ್ದುಪಡಿ ಮಾಡುವ ಬಗ್ಗೆ.

ಉಲ್ಲೇಖ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕಕುಉಅನಿನಿ/ಯೋಜನೆ/2014-15/2525 ದಿನಾಂಕ: 18.03.2015.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 15 ಕಕುಮ 2009 ದಿನಾಂಕ: 15.01.2010 ಅನುಬಂಧ-1 ರ ಕಂಡಿಕೆ-1 ಕ್ಕೆ ಈ ಕೆಳಕಂಡಂತೆ ಸೇರಿಸಿ ಓದಿಕೊಳ್ಳತಕ್ಕದ್ದು.

"ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳು ಇಲ್ಲದಿರುವ ಜಿಲ್ಲೆ/ತಾಲ್ಲೂಕುಗಳಲ್ಲಿ ಸದರಿ ಯೋಜನೆಗಳಡಿಯಲ್ಲಿ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳಲ್ಲಿ ನೊಂದಣಿ ಆಗದೆ ಇರುವ ಸದಸ್ಯರುಗಳನ್ನು ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಬಹುದಾಗಿದೆ".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Sudarshan Kumar 04/05/15
(ಡಿ.ಎಸ್.ಸುದರ್ಶನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಪಶುಸಂಗೋಪನೆ)
04/5/15

ಗೆ:

1) ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು.
4) ನಿರ್ದೇಶಕರು, ಯೋಜನೆ ಮತ್ತು ಸಾಂಖ್ಯಿಕ ಇಲಾಖೆ (ಪರಿಯೋಜನಾ ರಚನಾ ವಿಭಾಗ), ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಹೆಬ್ಬಾಳ, ಬೆಂಗಳೂರು.
6) ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
7) ಉಪ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
8) ಖಜಾನಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
9) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.